## ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಗೌರವ ಧನ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಇಡಿ 236 ಟಿಪಿಇ 2007, ದಿನಾಂಕ:01.12.2008.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 16 ಟಿಪಿಇ 2017, ದಿನಾಂಕ:11.12.2019.
3. ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020.
4. ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024, ದಿನಾಂಕ:04.03.2024.
5. ಆಯುಕ್ತಾಲಯದ ಏಕ ಕಡತ ಸಂಖ್ಯೆ:DTE-PLAN0DVP1/76/2023 (ಗಣಕ ಸಂಖ್ಯೆ:1195040)
6. ಆಯುಕ್ತಾಲಯದ ಏಕ ಕಡತ ಸಂಖ್ಯೆ:DTE-ADMI0EST(3)/3/2024 (ಗಣಕ ಸಂಖ್ಯೆ: 1382252)

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಸಂಭಾವನೆಯನ್ನು ಕ್ರಮವಾಗಿ ರೂ.7,500/- ಹಾಗೂ ರೂ.10,000/-ಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಮಾಸಿಕ ಗೌರವ ಧನವನ್ನು ರೂ.7,500/- ರಿಂದ 12,500/- ಕ್ಕೆ ಹಾಗೂ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಮಾಸಿಕ ಗೌರವ ಧನವನ್ನು ರೂ.10,000/- ಗಳಿಂದ 15,000/- ಕ್ಕೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ, ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.15000/- ಗಳನ್ನು ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ ರೂ.12500/-ಗಳನ್ನು ನಿಗದಿಪಡಿಸಲಾಗಿರುತ್ತದೆ. ವಿವರ ಕೆಳಕಂಡಂತಿವೆ.

| ಕ್ರ. ಸಂ. | ಸಂಸ್ಥೆ | ಕನಿಷ್ಠ ಮಾಸಿಕ ಕಾರ್ಯಭಾರ | ಗರಿಷ್ಠ ಮಾಸಿಕ ಕಾರ್ಯಭಾರ | ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಭತ್ಯೆ |
|---|---|---|---|---|
| 1 | ಇಂಜಿನಿಯರಿಂಗ್ ಕಾಲೇಜು | 16 ಗಂಟೆ | 32 ಗಂಟೆ | ರೂ.15,000/- |
| 2 | ಪಾಲಿಟೆಕ್ನಿಕ್ ಹಾಗೂ ಕಿರಿಯ ತಾಂತ್ರಿಕ ಶಾಲೆಗಳು | 20 ಗಂಟೆ | 36 ಗಂಟೆ | ರೂ.12,500/- |

...2

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ ಪಾಲಿಟೆಕ್ನಿಕ್ ಕಾಲೇಜುಗಳು/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಇಡಿ 174 ಡಿಟಿಇ 2020, ದಿನಾಂಕ:22.12.2020ರನ್ವಯ ಪಾವತಿಸಲಾಗುತ್ತಿದ್ದ, ಗೌರವಧನವನ್ನು ಸದರಿ ಅರೆಕಾಲಿಕ ಉಪನ್ಯಾಸಕರು ಸಲ್ಲಿಸಿರುವ ಸೇವಾವಧಿಗೆ ಅನುಗುಣವಾಗಿ ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿದೆ.

| ಕ್ರ. ಸಂ. | ಸೇವಾವಧಿ | ಹೆಚ್ಚಿಸಲಾದ ಗೌರವಧನ (ರೂ.ಗಳಲ್ಲಿ) |
|---|---|---|
| 1. | 5 ವರ್ಷಕ್ಕಿಂತ ಕಡಿಮೆ ಸೇವಾವಧಿ | 5,000/- |
| 2. | 5 ವರ್ಷದಿಂದ 10 ವರ್ಷಗಳ ಸೇವಾವಧಿ | 6,000/- |
| 3. | 10 ವರ್ಷದಿಂದ 15 ವರ್ಷಗಳ ಸೇವಾವಧಿ | 7,000/- |
| 4. | 15 ವರ್ಷ ಮೇಲ್ಪಟ್ಟು ಸೇವಾವಧಿ | 8,000/- |

ಮೇಲೆ ಓದಲಾದ ಕ್ರಮ ಸಂಖ್ಯೆ (5) & (6)ರಲ್ಲಿ ಆಯುಕ್ತರು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳು ವೇತನ ಹೆಚ್ಚಳ ಮಾಡುವಂತೆ ಸಲ್ಲಿಸಿರುವ ಬೇಡಿಕೆಯನ್ನು ಉಲ್ಲೇಖಿಸುತ್ತಾ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಸರ್ಕಾರಿ ಪಾಲಿಟೆಕ್ನಿಕ್‌ಗಳು /ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಖಾಯಂ ಬೋಧಕ ವರ್ಗದವರಿಗೆ ಬೋಧನಾ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಯುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅವಶ್ಯವಿರುವ ಅರೆಕಾಲಿಕ ಉಪನ್ಯಾಸಕರ ಸೇವೆಯನ್ನು ತಾತ್ಕಾಲಿಕವಾಗಿ ಪಡೆದು ಪಾಠ ಪ್ರವಚನಗಳನ್ನು ನಿರ್ವಹಿಸಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14.01.2022ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ, ಪ್ರಸ್ತುತ ನಿಗದಿಪಡಿಸಲಾಗಿರುವ ಗರಿಷ್ಠ 8/10 ಗಂಟೆಗಳ ಕಾರ್ಯಭಾರಕ್ಕೆ ಬದಲಾಗಿ ಗರಿಷ್ಠ 15 ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಿ ಗೌರವಧನವನ್ನು ಹೆಚ್ಚಿಸಲಾಗಿದೆ. ಅದೇ ಮಾದರಿಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಸರ್ಕಾರಿ ಪಾಲಿಟೆಕ್ನಿಕ್‌ಗಳು/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಗೌರವಧನ ಹೆಚ್ಚಳವಾಗಿರುವುದಿಲ್ಲ. ಅದರಂತೆ, ಸದರಿ ಅರೆಕಾಲಿಕ ಉಪನ್ಯಾಸಕರುಗಳ ಕಾರ್ಯಭಾರಕ್ಕೆ ಅನುಗುಣವಾಗಿ ಮಾಸಿಕ ಗೌರವಧನವನ್ನು ಹೆಚ್ಚಳ ಮಾಡಬೇಕಾಗಿರುತ್ತದೆ.

ಪ್ರಸ್ತುತ, ಚಾಲ್ತಿಯಲ್ಲಿರುವ ಎಐಸಿಟಿಇಯ ಮಾನದಂಡಗಳನ್ವಯ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಯಂ ಬೋಧಕ ವರ್ಗದ ಸಹಾಯಕ ಪ್ರಾಧ್ಯಾಪಕರು ಒಂದು ವಾರಕ್ಕೆ ಕನಿಷ್ಠ 16 ಗಂಟೆಗಳ ಪಾಠ ಪ್ರವಚನ/ ಪ್ರಯೋಗಾಲಯ ತರಗತಿಗಳ ಕಾರ್ಯಭಾರವನ್ನು ತೆಗೆದುಕೊಳ್ಳಬೇಕಾಗಿರುತ್ತದೆ ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ

ಖಾಯಂ ಬೋಧಕ ವರ್ಗದ ಉಪನ್ಯಾಸಕರು ಒಂದು ವಾರಕ್ಕೆ ಕನಿಷ್ಠ 18 ಗಂಟೆಗಳ ಪಾಠ ಪ್ರವಚನ/ ಪ್ರಯೋಗಾಲಯ ತರಗತಿಗಳ ಕಾರ್ಯಭಾರವನ್ನು ತೆಗೆದುಕೊಳ್ಳಬೇಕಾಗಿರುತ್ತದೆ. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು ಸಾರ್ವಜನಿಕ ಶಿಕ್ಷಣ ಇಲಾಖೆಯು ಹೊರಡಿಸುವ ಶೈಕ್ಷಣಿಕ ಚಟುವಟಿಕೆಗಳನ್ವಯ ನಡೆಯಲಿದ್ದು, ಸದರಿ ಸಂಸ್ಥೆಗಳ ಖಾಯಂ ಉಪನ್ಯಾಸಕರು ವಾರಕ್ಕೆ ಕನಿಷ್ಠ 15 ರಿಂದ 18 ಗಂಟೆಗಳ ಪಾಠ ಪ್ರವಚನ ತರಗತಿಗಳ ಕಾರ್ಯಭಾರವನ್ನು ತೆಗೆದುಕೊಳ್ಳಬೇಕಾಗಿರುತ್ತದೆ. ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಬೋಧಕ ವರ್ಗದವರಿಗೆ ಎಐಸಿಟಿಇ ವೇತನ ಶ್ರೇಣಿಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಬೋಧಕ ಸಿಬ್ಬಂದಿಗಳಿಗೆ ರಾಜ್ಯ ವೇತನ ಶ್ರೇಣಿಯು ಅನ್ವಯಿಸಲಿದೆ. ಅದರಂತೆ, ಪ್ರಸ್ತುತ ಬೋಧಕ ವರ್ಗದವರ ಕನಿಷ್ಠ ವೇತನ ಕೆಳಕಂಡಂತಿದೆ.

| ಸಂಸ್ಥೆಗಳು | ಹುದ್ದೆ | ಹುದ್ದೆಯ ಕನಿಷ್ಠ ವೇತನ |
|---|---|---|
| ಸರ್ಕಾರಿ ಇಂಜಿನಿಯರಿಂಗ್ ಕಾಲೇಜು | ಸಹಾಯಕ ಪ್ರಾಧ್ಯಾಪಕರು | ರೂ. 57700 (ಎಐಸಿಟಿಇ ವೇತನ ಶ್ರೇಣಿ) |
| ಸರ್ಕಾರಿ ಪಾಲಿಟೆಕ್ನಿಕ್ | ಉಪನ್ಯಾಸಕರು | ರೂ. 56100 (ಎಐಸಿಟಿಇ ವೇತನ ಶ್ರೇಣಿ) |
| ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು | ಉಪನ್ಯಾಸಕರು | ರೂ. 40900 (ರಾಜ್ಯ ವೇತನ ಶ್ರೇಣಿ) |

ಅದರನ್ವಯ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಸರ್ಕಾರಿ ಪಾಲಿಟೆಕ್ನಿಕ್‌ಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಈ ಕೆಳಕಂಡಂತೆ ಪರಿಷ್ಕೃತ ಕಾರ್ಯಭಾರ ನಿಗದಿಪಡಿಸಿ ಹಾಗೂ ಮಾಸಿಕ ಗೌರವಧನವನ್ನು ಹೆಚ್ಚಿಸಬಹುದೆಂದು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ. ಸಂ. | ವಿದ್ಯಾರ್ಹತೆ | ಗರಿಷ್ಠ ಕಾರ್ಯಭಾರ ಮತ್ತು ಗರಿಷ್ಠ ಕಾರ್ಯಭಾರಕ್ಕೆ ಮಾಸಿಕ ಗೌರವ ಧನ | | |
|---|---|---|---|---|
| | | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು | ಸರ್ಕಾರಿ ಪಾಲಿಟೆಕ್ನಿಕ್ | ಕಿರಿಯ ತಾಂತ್ರಿಕ ಶಾಲೆ |
| 1. | 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 32000/- (ಮಾಸಿಕ ಗರಿಷ್ಠ ಕಾರ್ಯಭಾರ 60 ಗಂಟೆಗಳು) | ರೂ.28,000/- (ಮಾಸಿಕ ಗರಿಷ್ಠ ಕಾರ್ಯಭಾರ 68 ಗಂಟೆಗಳು) | - |
| 2. | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 30000/- (ಮಾಸಿಕ ಗರಿಷ್ಠ ಕಾರ್ಯಭಾರ 60 ಗಂಟೆಗಳು) | ರೂ.26,000/- (ಮಾಸಿಕ ಗರಿಷ್ಠ ಕಾರ್ಯಭಾರ 68 ಗಂಟೆಗಳು) | - |

...4

| | | | | |
|---|---|---|---|---|
| 3. | 5 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆಗಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 28,000/- (ಮಾಸಿಕ ಗರಿಷ್ಠ ಕಾರ್ಯಭಾರ 60 ಗಂಟೆಗಳು) | ರೂ.24,000/- (ಮಾಸಿಕ ಗರಿಷ್ಠ ಕಾರ್ಯಭಾರ 68 ಗಂಟೆಗಳು) | - |
| 4. | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗಧಿಪಡಿಸಿದ ವಿದ್ಯಾರ್ಹತೆಕ್ಕಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 26,000/- (ಮಾಸಿಕ ಗರಿಷ್ಠ ಕಾರ್ಯಭಾರ 60 ಗಂಟೆಗಳು) | ರೂ.22,000/- (ಮಾಸಿಕ ಗರಿಷ್ಠ ಕಾರ್ಯಭಾರ 68 ಗಂಟೆಗಳು) | - |
| 5. | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ | - | - | ರೂ.18000/- (ಮಾಸಿಕ ಗರಿಷ್ಠ ಕಾರ್ಯಭಾರ 56 ಗಂಟೆಗಳು) |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಸರ್ಕಾರಿ ಪಾಲಿಟೆಕ್ನಿಕ್‌ಗಳು/ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಅವರುಗಳ ವಿದ್ಯಾರ್ಹತೆ ಮತ್ತು ಸಲ್ಲಿಸಿದ ಸೇವಾವಧಿಯನ್ನು ಪರಿಗಣಿಸಿ, ಸದರಿ ಅರೆಕಾಲಿಕ ಉಪನ್ಯಾಸಕರುಗಳ ಕಾರ್ಯಭಾರಕ್ಕೆ ಅನುಗುಣವಾಗಿ ಮಾಸಿಕ ಗೌರವಧನವನ್ನು ಹೆಚ್ಚಳ ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023**
**ಬೆಂಗಳೂರು, ದಿನಾಂಕ:12ನೇ ಆಗಸ್ಟ್ 2024**

ಪ್ರಸ್ತಾವನೆಯಲ್ಲಿ ವಿವರಸಿರುವ ಅಂಶಗಳ ಹಿನ್ನೆಲೆಯಲ್ಲಿ, ಉನ್ನತ ಶಿಕ್ಷಣ ಇಲಾಖೆಯ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಕ್ರಮವಾಗಿ ಹಾಲಿ ವಾರಕ್ಕೆ ಗರಿಷ್ಠ 8/9/9 ಘಂಟೆಗಳ ಕಾರ್ಯಭಾರಕ್ಕೆ ಬದಲಾಗಿ, ವಾರಕ್ಕೆ ಗರಿಷ್ಠ 15/17/14 ಘಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಿ ಅವರುಗಳ ಮಾಸಿಕ ಗೌರವಧನವನ್ನು ಭವಿಷ್ಯವರ್ತಿಯಾಗಿ ಅಂದರೆ ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಷರತ್ತುಗಳಿಗೊಳಪಟ್ಟು ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಲಾಗಿದೆ.

| ಕ್ರ. ಸಂ. | ವಿದ್ಯಾರ್ಹತೆ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಅರೆಕಾಲಿಕ ಉಪನ್ಯಾಸಕರಿಗೆ | ಸರ್ಕಾರಿ ಪಾಲಿಟೆಕ್ನಿಕ್‌ಗಳ ಅರೆಕಾಲಿಕ ಉಪನ್ಯಾಸಕರಿಗೆ | ಕಿರಿಯ ತಾಂತ್ರಿಕ ಶಾಲೆಗಳ ಅರೆಕಾಲಿಕ ಉಪನ್ಯಾಸಕರಿಗೆ |
|---|---|---|---|---|
| 1. | 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 32000/- | ರೂ.28,000/- | - |

| | | | | |
|---|---|---|---|---|
| 2. | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 30000/- | ರೂ.26,000/- | - |
| 3. | 5 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆಗಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 28,000/- | ರೂ.24,000/- | - |
| 4. | 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಎಐಸಿಟಿಇ ನಿಗದಿಪಡಿಸಿದ ವಿದ್ಯಾರ್ಹತೆಕ್ಕಿಂತ ಕಡಿಮೆ ವಿದ್ಯಾರ್ಹತೆ ಹೊಂದಿರುವವರಿಗೆ | ರೂ. 26,000/- | ರೂ.22,000/- | - |
| 5. | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿನ ಅರೆಕಾಲಿಕ ಉಪನ್ಯಾಸಕರುಗಳಿಗೆ | - | - | ರೂ.18000/- |

**<u>ಷರತ್ತುಗಳು:</u>**

1. 2024-25ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ 294 ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು/ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ 1600 ಅರೆಕಾಲಿಕ ಉಪನ್ಯಾಸಕರು ಸೇರಿ ಒಟ್ಟು 1894 ಅರೆಕಾಲಿಕ ಉಪನ್ಯಾಸಕರುಗಳನ್ನು ಮಾತ್ರ ನೇಮಕ ಮಾಡಿಕೊಳ್ಳುವುದು;
2. ಗೌರವಧನ ಹೆಚ್ಚಳದಿಂದ ಉಂಟಾಗುವ ವೆಚ್ಚವನ್ನು 2024-25ನೇ ಸಾಲಿನ ಲೆಕ್ಕ ಶೀರ್ಷಿಕೆ:2203-00-105-0-01-324 ಮತ್ತು ಲೆಕ್ಕ ಶಿರ್ಷಿಕೆ:2203-00-112-0-02-324ರಡಿ ಒದಗಿಸಲಾದ ಅನುದಾನದಲ್ಲಿ ಭರಿಸಿ ಅನುದಾನ ಸಂಪೂರ್ಣವಾಗಿ ವೆಚ್ಚವಾದ ನಂತರ ಅವಶ್ಯವಿದ್ದಲ್ಲಿ ಹೆಚ್ಚುವರಿ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸುವುದು.
3. ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಕ್ರಮವಾಗಿ ವಾರಕ್ಕೆ ಗರಿಷ್ಠ 15/17/14 ಘಂಟೆಗಳ ಕಾರ್ಯಭಾರ ಇರುವುದನ್ನು ಕಡ್ಡಾಯವಾಗಿ ಪರಿಶೀಲಿಸಿ ನಂತರ ಮುಂದಿನ ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 09 ವೆಚ್ಚ-8/2024, ದಿನಾಂಕ:08.08.2024ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/8/2024

(ಮಹಾಂತೇಶಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ ಮತ್ತು ಇ), (ಎ ಮತ್ತು ಎಸ್.ಎಸ್.ಎ) ಮತ್ತು (ಇ ಮತ್ತು ಆರ್.ಎಸ್.ಎ), ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
5. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು/ಪಾಲಿಟೆಕ್ನಿಕ್ ಕಾಲೇಜುಗಳು/ ಕಿರಿಯ ತಾಂತ್ರಿಕ ಶಾಲೆಗಳಿಗೆ (ಆಯುಕ್ತಾಲಯದ ಮುಖಾಂತರ)
6. ಇ-ಆಡಳಿತ, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)/ ಶಾಖಾ ರಕ್ಷಾ ಕಡತ.

**ಪ್ರತಿಗಳು:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳ ಆಪ್ತ ಶಾಖೆ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು.